ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 871 (1122)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಅನುಷ್ಠಾನಗೊಳಿಸಿರುವ ಯೋಜನೆಗಳ ಬಗ್ಗೆ

(ಅ) ಕಳೆದ 2 ವರ್ಷಗಳಿಂದ ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಅನುಷ್ಠಾನಗೊಳಿಸಿರುವ ಯೋಜನೆಗಳಾವುವು ಹಾಗೂ ಪ್ರಸಕ್ತ ಸಾಲಿನಲ್ಲಿ ಹೊಸ ಯೋಜನೆಗಳನ್ನು ರೂಪಿಸಲಾಗಿದೆಯೇ ;

(ಆ) ಒಂದು ವರ್ಷದಿಂದ ಸದರಿ ಇಲಾಖೆಗೆ ಒದಗಿಸಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಕೈಮಗ್ಗವನ್ನೇ ಅವಲಂಬಿಸಿ ದುಡಿಯುತ್ತಿರುವ ನೇಕಾರರಿಗೆ ಸರಿಯಾದ ಮಾರುಕಟ್ಟೆ ವ್ಯವಸ್ಥೆ ಇಲ್ಲದಿರುವ ಕಾರಣ ನಷ್ಟವನ್ನು ಅನುಭವಿಸುತ್ತಿದ್ದು ಆ ನಷ್ಟವನ್ನು ಸರಿದೂಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)